ನೇಪ್ಪಿ ಗ್ರಾಮಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರು

1514 - ಶ್ರೀ ಯು.ಬಿ. ಬಣಕಾರ್ (ಹಿರೇಕೆರೂರ್) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಿರೇಕೆರೂರ್ ತಾಲ್ಲೂಕು ನೇಪ್ಪಿ ಗ್ರಾಮಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರು ಮಾಡಲು ವಿನಂತಿಸಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಸರ್ಕಾರ ಮಂಜೂರು ಮಾಡಲು ಕ್ರಮ ತೆಗೆದುಕೊಳ್ಳುವುದೇ?

ಡಾ॥ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಇಲ್ಲ

ಆ) ಸರ್ಕಾರದ ನಿಬಂಧನೆಯ ಲಕ್ಷ ವಂತಿಕ ಹಣ, 2 ಎಕರೆ ಜಮೀನು, ಬಾಡಿಗೆ ರಹಿತ ಕಟ್ಟಡ ನೀಡುವವರಿಗೆ ಭಾರತ ಸರ್ಕಾರದ ಮಾರ್ಗಸೂಚಿಯ ಅನುಸಾರ ಅಂದರೆ ಬಯಲು ಸೀಮೆಯ 30,000 ಜನಸಂಖ್ಯೆಗೆ ಹಾಗೂ ಗುಡ್ಡ ಗಾಡು ಮತ್ತು ಆದಿವಾಸಿ ಪ್ರದೇಶಗಳ 20,000 ಜನಸಂಖ್ಯೆಗೆ ಒಂದು ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮಂಜೂರು ಮಾಡಲಾಗುತ್ತಿದ್ದು ಅದರ ಅನುಸಾರ ಜಿಲ್ಲಾ ಪಂಚಾಯತ್ ಅನುಮೋದನೆಯೊಂದಿಗೆ ಪ್ರಸ್ತಾವನೆ ಬಂದಲ್ಲಿ ಕ್ರಮತೆಗೆದು ಕೊಳ್ಳಲಾಗುವುದು.

ಮಂಗಳೂರಿನ ಎಂ.ಆರ್.ಪಿ.ಎಲ್. ಸಂಸ್ಥೆಯಿಂದ ಹೊರಬರುವ ಮಾಲಿನ್ಯ

1561 - ಶ್ರೀ ಕೆ. ಜಯರಾಮ್ ಶೆಟ್ಟಿ (ಉಳ್ಳಾಲ) : ಮಾನ್ಯ ಪರಿಸರ, ಜೀವಿಶಾಸ್ತ್ರ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಅಸಂಪ್ರದಾಯಕ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಇತ್ತೀಚೆಗೆ ಮಂಗಳೂರಿನಲ್ಲಿರುವ ಎಂ.ಆರ್.ಪಿ.ಎಲ್.ಸಂಸ್ಥೆಯಿಂದ ಹೊರ ಹಾಕಲಾದ ಮಾಲಿನ್ಯ ಪದಾರ್ಥಗಳು ಮಂಗಳೂರಿನ ಸುತ್ತಮುತ್ತ ಕೆಲವು ಬಾವಿಗಳಲ್ಲಿ ಕಂಡು ಬಂದಿರುವ ಬಗ್ಗೆ ರಾಜ್ಯ ಸರಕಾರ ತನಿಖೆ ನಡೆಸಿದೆಯೇ?

ಆ) ತನಿಖೆ ನಡೆಸಿದ್ದರೆ ತನಿಖಾ ವರದಿ ಸಾರಾಂಶ ಏನು?

ಇ) ಹಾಗೂ ಸರಕಾರ ಈ ಬಗ್ಗೆ ಮುಂದೆ ಏನೇನು ಕ್ರಮ ಕೈಗೊಳ್ಳಲಿದೆ?

ಶ್ರೀ ಬಸವರಾಜ್ ನೀ. ಶಿವಣ್ಣನವರ್ (ಪರಿಸರ, ಜೀವಿಶಾಸ್ತ್ರ, ವಿಜ್ಞಾನ, ತಂತ್ರಜ್ಞಾನ ಹಾಗೂ ಅಸಂಪ್ರದಾಯಕ ಇಂಧನ ರಾಜ್ಯ ಸಚಿವರು) :

ಅ) ಹೌದು